ನಾಗಮಂಗಲ ತಾಲ್ಲೂಕಿನಲ್ಲಿ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಟೆಕ್ನಿಷಿಯನ್ ಕೊರತೆ

2519(3134) ಶ್ರೀ ಚಲುವರಾಯ ಸ್ವಾಮಿ ಎನ್. (ನಾಗಮಂಗಲ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ನಾಗಮಂಗಲ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಟೆಕ್ನಿಷಿಯನ್ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಎಕ್ಸರೇ ಯೂನಿಟ್ ಇದ್ದು ಇದನ್ನು ನಿರ್ವಹಿಸಲು ಎಕ್ಸರೆ ಟೆಕ್ನಿಷಿಯನ್ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೇಯೇ; ಬಂದಿದಲ್ಲಿ, ಇದನ್ನು ನಿರ್ವಹಿಸಲು ಸರ್ಕಾರದ ಕ್ರಮವೇನು?

ಶ್ರೀ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ವೈದ್ಯರ ಹುದ್ದೆ ಖಾಲಿ ಇಲ್ಲ, ಎಕ್ಸರೆ ಟೆಕ್ನಿಷಿಯನ್ ಹುದ್ದೆ ಖಾಲಿ ಇರುವುದು ಗಮನಕ್ಕೆ ಬಂದಿದೆ.

ಆ) ಸದ್ಯಕ್ಕೆ ಸಾರ್ವಜನಿಕ ಆಸ್ಪತ್ರೆ, ನಾಗಮಂಗಲ ಇಲ್ಲಿ ಎಕ್ಸರೆ ಟೆಕ್ನಿಷಿಯನ್ ಹುದ್ದೆ ಖಾಲಿ ಇರುತ್ತದೆ. ಆದರೆ ಸಾರ್ವಜನಿಕರಿಗೆ ಅನಾನುಕೂಲವಾಗದಂತೆ ಸೇವೆ ಸಲ್ಲಿಸಲು ಒಬ್ಬ ಎಕ್ಸರೆ ಟೆಕ್ನಿಷಿಯನನ್ನು ಪಾಂಡವಪುರದಿಂದ ನಿಯೋಜಿಸಲಾಗಿದೆ. ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಹಾಗೂ ನೇರ ನೇಮಕಾತಿಗೆ ವಿಶೇಷ ನೇಮಕಾತಿ ನಿಯಮಗಳನ್ನು ರಚಿಸುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.

ಚಿಂತಾಮಣಿ ತಾಲ್ಲೂಕಿನಲ್ಲಿ ನೀರಿನ ಸಮಸ್ಯೆ.

2520(3011) ಶ್ರೀ ಚೌಡರೆಡ್ಡಿ (ಚಿಂತಾಮಣಿ) :— ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಚಿಂತಾಮಣಿ ಕ್ಷೇತ್ರ ಬೇಳೂರು ಹೋಬಳಿ, ನಿಮ್ಮಕಾಯಲಹಳ್ಳಿ, ನಲ್ಲಸಾನಪಲ್ಲಿ, ನಲ್ಲಗುಟ್ಟಹಳ್ಳಿಗಳಲ್ಲಿ ನೀರಿನ ಟ್ಯಾಂಕುಗಳು ರಿಪೇರಿಗೊಂಡಿದ್ದು ನೀರು ಬಿಡದೆ ಹಳ್ಳಿಯವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಇದೇ ಹೋಬಳಿ ಗೊಲ್ಲಹಳ್ಳಿ, ವೆಂಕಾಟಪುರ, ಪುಲಗಲ್ಲು, ಪಾಳ್ಯಕೆರೆಗಳಲ್ಲಿ ನೀರಿನ ಟ್ಯಾಂಕುಗಳು ಮಂಜೂರಾಗಿದ್ದರೂ ಸಹ ಕಾಮಗಾರಿ ಕೈಗೊಳ್ಳದೆ ಈ ಹಳ್ಳಿಗಳಲ್ಲಿ ವಾಸವಾಗಿರುವ ಜನರಿಗೆ ಕುಡಿಯುವ ನೀರಿನ ಕೊರತೆ ತೀವ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;